ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 10ನೇ ಜುಲೈ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

2018–19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಹಾಗೂ ಈ ಕೆಳಕಂಡ ಅನುದಾನಗಳ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ:

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
24	ಇಂಧನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
05	ಒಳಾಡಳಿತ ಮತ್ತು ಸಾರಿಗೆ
20	ಲೋಕೋಪಯೋಗಿ
14	ಕಂದಾಯ

09	ಸಹಕಾರ
21	ಜಲ ಸಂಪನ್ಮೂಲ
17	ಶಿಕ್ಷಣ
15	ಮಾಹಿತಿ ತಂತ್ರಜ್ಞಾನ
18	ವಾಣಿಜ್ಯ ಮತ್ತು ಕೈಗಾರಿಕೆ
07	ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
01	ಕೃಷಿ ಮತ್ತು ತೋಟಗಾರಿಕೆ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
10	ಸಮಾಜ ಕಲ್ಯಾಣ
16	ವಸತಿ
19	ನಗರಾಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
13	ಆಹಾರ ಮತ್ತು ನಾಗರೀಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
23	ಕಾರ್ಮಿಕ ಮತ್ತು ಕೌಶಲ್ಯ ಅಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ

3. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಸಿ.ಎಂ. ಉದಾಸಿ** ಅವರು ಹಾವೇರಿ ಜಿಲ್ಲೆಗೆ ಹೊಸದಾಗಿ ಸರ್ಕಾರಿ ಮೆಡಿಕಲ್ ಕಾಲೇಜು ಮಂಜೂರು ಮಾಡುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಈ. ತುಕರಾಂ** ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ನರಸಿಂಗಾಪುರ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ದೋಣಿಮಲೈನಲ್ಲಿರುವ ಕೇಂದ್ರ ಸರ್ಕಾರಿ ಸ್ವಾಮ್ಯದ ಎನ್.ಎಂ.ಡಿ.ಸಿ. ಕಂಪನಿಯು ವಾಣಿಜ್ಯ ಮತ್ತು ಕೈಗಾರಿಕಾ ಉದ್ಯಮ ಮತ್ತು ಎಸ್.ಸಿ. ಮತ್ತು ಎಸ್.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವುದಲ್ಲದೇ ಸುತ್ತಮುತ್ತ ಗ್ರಾಮಗಳ ಜನರ ಮೇಲೆ ದೌರ್ಜನ್ಯವೆಸಗಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ದಿನಕರ್ ಕೆ. ಶೆಟ್ಟಿ** ಅವರು ಶರಾವತಿ ನದಿಯ ಮೂಲದ ಹೊನ್ನಾವರ ಪೂರ್ವ ಹಾಗೂ ಮಾರ್ಗ ಮಧ್ಯದ ಒಂಭತ್ತು ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

4) **ಶ್ರೀ ಅರವಿಂದ ಲಿಂಬಾವಳಿ** ಅವರು ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಟ್ಟಂದೂರು ಅಗ್ರಹಾರ ಕೆರೆ ಸಂಪೂರ್ಣವಾಗಿ ಒತ್ತುವರಿಯಾಗಿದ್ದು, ಕೆರೆಯ ಪ್ರದೇಶದ ಒತ್ತುವರಿಯನ್ನು ಕೂಡಲೇ ತೆರವುಗೊಳಿಸಿ ಕೆರೆಯನ್ನು ಸಂರಕ್ಷಿಸುವ ಕುರಿತು ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಅರಗ ಜ್ಞಾನೇಂದ್ರ** ಅವರು ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಮಂಜೂರಾಗಿರುವ ಪಂಚಾಯ್ತಿಗಳ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಿದ ತರುವಾಯ ಅವರುಗಳು ವಸತಿ ಕಾಮಗಾರಿಯನ್ನು ಪ್ರಾರಂಭಿಸಿದ್ದು, ವಸತಿ ನಿಗಮವು ಕಾಮಗಾರಿಯನ್ನು ತಡೆಹಿಡಿದಿರುವುದರಿಂದ ವಸತಿ ಫಲಾನುಭವಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಎನ್. ಬಾಲಕೃಷ್ಣ** ಅವರು ಬೆಂಗಳೂರು ನಗರ ಸಿವಿಲ್ ಪೊಲೀಸ್ ಹುದ್ದೆಗೆ 2017ರ ಮೇ 28ರಂದು ಸರ್ಕಾರ ಹೊರಡಿಸಿರುವ ಅಧಿಸೂಚನೆಯಂತೆ ವೈದ್ಯಕೀಯ ಪರೀಕ್ಷೆ, ಸಿಂಧುತ್ವ ಹಾಗೂ ಇತರೆ ದಾಖಲಾತಿಗಳ ಪರಿಶೀಲನೆ ಪೂರ್ಣಗೊಂಡಿದ್ದು, ಕೂಡಲೇ ನೇಮಕಾತಿ ಆದೇಶ ಹೊರಡಿಸಿ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ.

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm